ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE

ಸರ್ಕಾರಕ್ಕೆ ನೈತಿಕತೆ ಇಲ್ಲವೆಂದ ಕಾಂಗ್ರೆಸ್‌ನಿಂದ ಬಹಿಷ್ಕಾರ

# ಸಿದ್ದರಾಮಯ್ಯಗೆ ಶಾಶ್ವತ ವಿರೋಧ ಪಕ್ಷ ಸ್ಥಾನ

ಬೆಂಗಳೂರು: ಬಜೆಟ್ ಮಂಡನೆ ಸಂದರ್ಭದಲ್ಲಿ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ನಡುವೆ ವಾಕ್ಸಮರ ತಾರಕಕ್ಕೆ ಏರಿದ್ದು, ಪ್ರತಿಪಕ್ಷ ಕಾಂಗ್ರೆಸ್ ಸಭಾತ್ಯಾಗ ಮಾಡುವುದರೊಂದಿಗೆ ವಿಧಾನಮಂಡಲದ ಇತಿಹಾಸದಲ್ಲಿ ಅಪರೂಪದ ವಿದ್ಯಮಾನ ದಾಖಲಾಯಿತು.

ಬಜೆಟ್ ಮಂಡನೆಗೆ ಸರ್ಕಾರಕ್ಕೆ ನೈತಿಕತೆ ಇಲ್ಲ ಎಂದು ಆಕ್ಷೇಪಿಸಿ ತೀವ್ರ ವಾಗ್ವಾದ ನಡೆಸಿದ ಕಾಂಗ್ರೆಸ್ ಸಭಾತ್ಯಾಗ ನಡೆಸಿದರೆ, 'ಸಿದ್ದರಾಮಯ್ಯ ಅವರನ್ನು ಶಾಶ್ವತವಾಗಿ ವಿರೋಧಪಕ್ಷ ಸ್ಥಾನದಲ್ಲೇ ಕೂರಿಸದೆ ಇದ್ದರೆ ನನ್ನ ಹೆಸರು ಯಡಿಯೂರಪ್ಪನೇ ಅಲ್ಲ" ಎಂದು ಮುಖ್ಯಮಂತ್ರಿ ಆವೇಶದಲ್ಲಿ ಸವಾಲು ಎಸೆದರು.

ಇದಕ್ಕೆ ನಂತರ ಸುದ್ದಿಗೋಷ್ಠಿಯಲ್ಲಿ ಅಷ್ಟೇ ಕಟುವಾಗಿ ಪ್ರತಿಕ್ರಿಯಿಸಿದ ಸಿದ್ಧರಾಮಯ್ಯ, 'ಯಡಿಯೂರಪ್ಪ ಭ್ರಮೆಯಲ್ಲಿದ್ದಾರೆ' ಎಂದು ಕಟುಕಿ



ಪರತಾಳು ಹಾಲಪ್ಪ ಅವರ ಪುತ್ರಿ ನಿಶ್ಚಿತಾರ್ಥ ಸಂದರ್ಭದಲ್ಲಿ ಎದುರಾದ ಸಿಎಂ ಮತ್ತು ಸಿದ್ದು ಉಭಯ ಕುಶಲೋಪರಿ.

ಯಾಡಿದರು. ರಾಜ್ಯ ವಿಧಾನಮಂಡಲ ಇತಿಹಾಸದಲ್ಲಿ ಬಜೆಟ್ ಮಂಡನೆಯನ್ನು ಬಹಿಷ್ಕರಿಸಿದ ನಿದರ್ಶನ ಅಪರೂಪ. ಸೋಮವಾರ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮಂಡಿಸಿದ ಎಂಟನೇ ಬಜೆಟ್ ಅದಕ್ಕೆ ಸಾಕ್ಷಿಯಾಯಿತು. ಬಜೆಟ್ ಮಂಡನೆಗೆ ಮುಂದಾಗುತ್ತಿದ್ದಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಬಜೆಟ್ ಬಹಿಷ್ಕರಿಸಿ ಸಭಾತ್ಯಾಗ ಮಾಡಿತು.

"ಇದು ಅನೈತಿಕ ಸರ್ಕಾರ, 2.43 ಲಕ್ಷ ಕೋಟಿ ರೂ. ಅನ್ನು ಇವರ ಕೈಗೆ ಕೊಡಲು ಸಾಧ್ಯವಿಲ್ಲ. ಹೀಗಾಗಿ, ನಾವು ಬಹಿಷ್ಕರಿಸುತ್ತೇವೆ" ಎಂದು ಹೇಳಿ ಕಪ್ಪು ಪಟ್ಟಿ ಕಟ್ಟಿಕೊಂಡು ಸದನಕ್ಕೆ ಆಗಮಿಸಿದ ಕಾಂಗ್ರೆಸ್ ಸದಸ್ಯರು ಸಭಾತ್ಯಾಗ ಮಾಡಿದರು.

ಇದು ಮುಖ್ಯಮಂತ್ರಿ ಅವರನ್ನು ತೀವ್ರವಾಗಿ ಕೆರಳಿಸಿತಾದರೂ, ಬಜೆಟ್ ಮಂಡಿಸಿದರು. ಆದರೆ, ಬಜೆಟ್ ಮಂಡನೆ ಬಳಿಕ ಸುದ್ದಿಗೋಷ್ಠಿಯಲ್ಲಿ ಸಿದ್ದರಾಮಯ್ಯ ವಿರುದ್ಧ ಕೆಂಡಕಾರಿದರು. ಒಂದು ಹಂತದಲ್ಲಿ 'ಏನು ನೈತಿಕತೆ ಅಂತಾ ಅವರು ಪ್ರಶ್ನೆ ಮಾಡೋದು.. ಅವರ ತಲೆ..' ಎಂದು ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು.

ಸಿದ್ದುಗೆ ಪಂಥಾಹ್ವಾನ ನೀಡಿದ ಯಡಿಯೂರಪ್ಪ 'ನಾನು ಸಿದ್ದರಾಮಯ್ಯಗೆ ಸವಾಲು ಹಾಕ್ತೇನೆ, ಬರುವ ಚುನಾವಣೆಯಲ್ಲಿ ನಾವು 135 ಸ್ಥಾನ ಗೆದ್ದು ಸಿದ್ದರಾಮಯ್ಯ ಅವರನ್ನು ವಿರೋಧ ಪಕ್ಷದಲ್ಲಿ ಕೂರಿಸುತ್ತೇನೆ. ಇಲ್ಲ ಅಂದರೆ ನೀವು ನನ್ನನ್ನು ಯಡಿಯೂರಪ್ಪ ಅಂತಾ ಕರೀಬೇಡಿ,' ಎಂದರು.

ಇದಕ್ಕೂ ಮುನ್ನ ಸುದ್ದಿಗೋಷ್ಠಿ ನಡೆಸಿದ ಸಿದ್ದರಾಮಯ್ಯ, ಕೆಐಎಡಿಬಿ ಭೂ ಅಕ್ರಮಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಸಚಿವ ಮುರುಗೇಶ್ ನಿರಾಣಿ ಕ್ರಿಮಿನಲ್ ಆರೋಪ ಎದುರಿಸುತ್ತಿದ್ದು, ಇವರಿಬ್ಬರ ವಿರುದ್ಧ ತನಿಖೆ ಮಾಡುವಂತೆ ಸುಪ್ರೀಂಕೋರ್ಟ್ ಆದೇಶ ಮಾಡಿದೆ. ಇಬ್ಬರೂ ಒಂದು ಹಂತದಲ್ಲಿ ನಿರೀಕ್ಷಣಾ ಜಾಮೀನಿನ ಮೇಲೆ ಹೊರಗಿದ್ದಾರೆ ಎಂದು ದೂರಿದರು.